ಆ) ಕೇಂದ್ರ ಸರ್ಕಾರದ ಬಿಡುಗಡೆ ಮಾಡುತ್ತಿರುವ ಸಕ್ಕರೆ ಮತ್ತು ಸೀಮೆ ಎಣ್ಣೆಯನ್ನು ಹೆಚ್ಚಿಸುವಂತೆ ಕೋರಲಾಗಿದೆ.

ರಾಜ್ಯದ ಪಡಿತರ ಚೀಟಿದಾರರ ಪ್ರಸ್ತುತ ಬೇಡಿಕೆಯು 75,000 ಕೆ. ಎಲ್. ಸೀಮೆ ಎಣ್ಣೆ ಮತ್ತು 33,773 ಮೆಟ್ರಿಕ್ ಟನ್ ಸಕ್ಕರೆಯಾಗಿದ್ದು, ಕೇಂದ್ರ ಸರ್ಕಾರವು ಹಾಲಿ 19,140 ಮೆಟ್ರಿನ್ ಸಕ್ಕರೆ ಹಾಗೂ 54,940 ಕೆ.ಎಲ್ ಸೀಮೆ ಎಣ್ಣೆ ಬಿಡುಗಡೆ ಮಾಡುತ್ತಿದೆ.

ಆದರೆ ಸೀಮೆ ಎಣ್ಣೆಯನ್ನು ಕೂಪನ್ ಮೂಲಕ ವಿತರಣೆಯನ್ನು ಜಾರಿಗೊಳಿಸಿದ ನಂತರ ಉಳಿತಾಯ ಮಾಡಿದ ಸೀಮೆ ಎಣ್ಣೆಯನ್ನು ಗ್ರಾಮಾಂತರ ಪ್ರದೇಶದ ಪಡಿತರ ಚೀಟಿದಾರರಿಗೆ ನೀಡಲು ವರ್ಗಾಯಿಸಲಾಗಿದೆ.

ಕೊರಟಗೆರೆ ಕೋಳಲು ಗ್ರಾಮಕ್ಕೆ ಆರಕ್ಷಕ ಠಾಣೆ ಮಂಜೂರಾತಿ

277(353) ಶ್ರೀ ಸಿ. ಚನ್ನಿಗಪ್ಪ (ಕೊರಟಗೆರೆ) : ಮಾನ್ಯ ಗೃಹ ಮತ್ತು ವಕ್ಫ್ ರಾಜ್ಯ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ

ಅ) ರಾಜ್ಯದಲ್ಲಿರುವ ಪೋಲೀಸ್ ಠಾಣೆಗಳ ಸಂಖ್ಯೆ ಎಷ್ಟು? ಹಾಗೂ ಯಾವ ಆಧಾರದ ಮೇಲೆ ಆರಕ್ಷಕ ಠಾಣೆಗಳನ್ನು ತೆರೆಯಲಾಗುತ್ತಿದೆ.

ಆ) ತುಮಕೂರು ಜಿಲ್ಲೆಯ ಕೊರಟಗೆರೆ ತಾಲ್ಲೂಕಿನ ಕೋಳಲು ಗ್ರಾಮಕ್ಕೆ ಆರಕ್ಷಕ ಠಾಣೆ ಅವಶ್ಯಕತೆ ಇದ್ದು ಈ ವಿಷಯದಲ್ಲಿ ಸದನದಲ್ಲಿ ಪ್ರಸ್ತಾಪಿಸಿ ಭರವಸೆ ನೀಡಿದ್ದರೂ ಇದುವರೆವಿಗೂ ಠಾಣೆಯನ್ನು ತೆರೆಯದಿರಲು ಕಾರಣಗಳೇನು?

ಶ್ರೀ ಆರ್. ರೋಷನ್ ಬೇಗ್ (ಗೃಹ ಮತ್ತು ವಕ್ಫ್ ರಾಜ್ಯ ಸಚಿವರು) :

ಅ) ರಾಜ್ಯದ ಪೋಲೀಸ್ ಠಾಣೆಗಳ ಸಂಖ್ಯೆ ಒಟ್ಟು 770, ರಾಷ್ಟ್ರೀ ಪೋಲೀಸ್ ಅಯೋಗದ ಶಿಫಾರಸ್ಸುಗಳನ್ನು ಗಣನೆಗೆ ತೆಗೆದುಕೊಂಡು ಪೋಲೀಸ್ ಠಾಣೆಗಳನ್ನು ತೆರೆಯಲಾಗುತ್ತದೆ.

ಆ) ತುಮಕೂರು ಜಿಲ್ಲೆಯ ಕೊರಟಗೆರೆ ತಾಲ್ಲೂಕಿನ ಕೋಳಲು ಗ್ರಾಮಕ್ಕೆ ಆರಕ್ಷಕ ಠಾಣೆ ತೆರೆಯುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದ್ದು, ಹಣಕಾಸಿನ ಲಭ್ಯತೆಯನ್ನು ಅನುಸರಿಸಿ ಕ್ರಮಕೈಗೊಳ್ಳಲಾಗುವುದು.

ರಾಜ್ಯದಲ್ಲಿ ವಿದ್ಯುತ್ ಕೊರತೆ ನಿವಾರಿಸುವಿಕೆ

278 (359) ಶ್ರೀ ಸಿ. ಚನ್ನಿಗಪ್ಪ (ಕೊರಟಗೆರೆ) : ಮಾನ್ಯ ಇಂಧನ ರಾಜ್ಯ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ

ಅ) ರಾಜ್ಯದಲ್ಲಿ ವಿದ್ಯುತ್ ಅಭಾವದಿಂದ ಆದರಲ್ಲೂ ಗ್ರಾಮಾಂತರ ಪ್ರದೇಶದಲ್ಲಿ ರೈತರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?

ಆ) ಈ ತೊಂದರೆಯನ್ನು ನಿವಾರಿಸಿ ಗ್ರಾಮಾಂತರ ಪ್ರದೇಶದ ರೈತರಿಗೆ ವಿದ್ಯುತ್ ಒದಗಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು?